**<u>ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾಯವರ ನ್ಯಾಯಾಲಯ, ಹುಣಸೂರು.</u>**

**<u>ಸಿ.ಸಿ. 1347/2025</u>**

**ಫಿರ್ಯಾದುದಾರರು** : ಸರಕಾರ (ಹುಣಸೂರು ಪಟ್ಟಣ ಪೊಲೀಸರಿಂದ)

**– ವಿರುದ್ಧ –**

**ಆರೋಪಿ** : ಆಯುಬ್ ಖಾನ್.

**ಶ್ರೀಮತಿ ಅನಿತ, ಬಿ.ಎ.(ಲಾ), ಎಲ್.ಎಲ್.ಬಿ., ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ಹುಣಸೂರು ಆದ ನಾನು ಈ ಕೆಳಗೆ ಕಾಣಿಸಿರುವ:**

ಆಯುಬ್ ಖಾನ್, ಬಿನ್ ಲೇಟ್ ರಫೀಕ್ ಅಹಮ್ಮದ್,<br>45 ವರ್ಷ, ವೆಲ್ಡರ್, ವಾಸಃ ಶಬ್ಬೀರ್ ನಗರ, ಹುಣಸೂರು ಟೌನ್,<br>ಮೈಸೂರು ಜಿಲ್ಲೆ.

**<u>ದೋಷಾರೋಪಣೆ</u>**

ಆದ ನಿಮ್ಮ ವಿರುದ್ಧ ಈ ಕೆಳಗಿನಂತೆ ಹೊರಿಸಿರುವ ದೋಷಾರೋಪಣೆ ಏನೆಂದರೆಃ

ದಿನಾಂಕಃ 05.11.2025ರಂದು ಬೆಳಿಗ್ಗೆ 9.00ಗಂಟೆ ಸಮಯದಲ್ಲಿ ಹುಣಸೂರು ಪಟ್ಟಣ ಪೊಲೀಸ್ ಠಾಣಾ ವ್ಯಾಪ್ತಿಯ ಶಬ್ಬೀರ್ ನಗರದಲ್ಲಿರುವ ಚಾಸಾ.1ಅಜಾಜ್ ಪಾಷಾರವರು ತಮ್ಮ ಖಾಲಿ ಜಾಗದಲ್ಲಿ ಲಾರಿ ನಿಲ್ಲಿಸಿಕೊಂಡು ಲಾರಿ ಬಾಡಿಯನ್ನು ಕಟ್ಟುತ್ತಿದ್ದಾಗ ಆರೋಪಿಯಾದ ನೀವು ಹಳೆ ದ್ವೇಷದಿಂದ ಚಾಸಾ.1ರವರಿಗೆ ಬೋಳಿಮಗನೇ, ಸೂಳೆ ಮಗನೆ ರಸ್ತೆಯಲ್ಲಿ ಲಾರಿಯನ್ನು ಏಕೆ ನಿಲ್ಲಿಸಿದ್ದೀಯಾ ಎಂದು ಅವಾಚ್ಯ ಶಬ್ದಗಳಿಂದ ಬೈದು ಸಾರ್ವಜನಿಕ ಶಾಂತಿಗೆ ಭಂಗವನ್ನುಂಟು ಮಾಡಿರುತ್ತೀರಿ ಎಂದು ತನಿಖೆಯಿಂದ ದೃಢಪಟ್ಟಿದ್ದು, ಆದುದರಿಂದ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.352ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಎರಡನೇಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂಧರ್ಭಗಳಂದು ಆರೋಪಿಯಾದ ನೀವು ಚಾಸಾ-1ರವರಿಗೆ ಅವಾಚ್ಯ ಶಬ್ದಗಳಿಂದ ಬೈಯುತ್ತಿದ್ದಾಗ ಚಾಸಾ.1ರವರು ನಿಮಗೆ ಯಾಕಪ್ಪ ಬೈಯುತ್ತೀಯಾ ನಾನು ನನ್ನ

ಲಾರಿಯನ್ನು ನನ್ನ ಸ್ವಂತ ಜಾಗದಲ್ಲಿ ನಿಲ್ಲಿಸಿಕೊಂಡು ಕೆಲಸ ಮಾಡುತ್ತಿದ್ದೇನೆ ನಿನಗೆ ತಿರುಗಾಡಲು ನಾನು ತೊಂದರೆ ಮಾಡಿಲ್ಲ ಎಂದು ಹೇಳಿದಾಗ ನೀವು ಏಕಾಏಕಿ ಅವರ ಕತ್ತಿನ ಪಟ್ಟಿ ಹಿಡಿದು ಬೋಳಿಮಗನೇ ಎಂದು ಕೈಯಿಂದ ಎಡಭುಜಕ್ಕೆ ಜೋರಾಗಿ ಹೊಡೆದು ಕೆಳಕ್ಕೆ ತಳ್ಳಿದ್ದಾಗ ಅವರು ಎಡಮೊಗ್ಗಲಾಗಿ ಕೆಳಕ್ಕೆ ಬಿದ್ದು, ಎಡ ಗದ್ದದ ಬಳಿ ಮತ್ತು ಎಡತೊಡೆಯ ಬಳಿ ಸಾಮಾನ್ಯ ಸ್ವರೂಪದ ನೋವುಂಟು ಮಾಡಿರುತ್ತೀರಿ ಎಂದು ತನಿಖೆಯಿಂದ ದೃಢಪಟ್ಟಿದ್ದು, ಆದುದರಿಂದ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.115(2) ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೂರನೇಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂಧರ್ಭಗಳಂದು ಆರೋಪಿಯಾದ ನೀವು ಚಾಸಾ-1ರವರಿಗೆ ಅವಾಚ್ಯ ಶಬ್ದಗಳಿಂದ ಬೈದು, ಕೈಗಳಿಂದ ಹೊಡೆಯುತ್ತಿದ್ದಾಗ ಚಾಸಾ.1ರವರು ನಿಮಗೆ ಯಾಕೆ ನೀನು ನನಗೆ ಹೊಡಿಯುತ್ತೀಯಾ ಎಂದು ಕೇಳಿದ್ದಕ್ಕೆ ನೀವು ಅವರಿಗೆ ಬೋಳಿ ಮಗನೇ ತಿರುಗಿ ಮಾತನಾಡುತ್ತೀಯಾ ಎಂದು ಅಡ್ಡಗಟ್ಟಿ ತಡೆದು ಅಕ್ರಮ ತಡೆಯನ್ನುಂಟು ಮಾಡಿರುತ್ತೀರಿ ಎಂದು ತನಿಖೆಯಿಂದ ದೃಢಪಟ್ಟಿದ್ದು, ಆದುದರಿಂದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ 126(2)ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂಧರ್ಭಗಳಂದು ಆರೋಪಿಯಾದ ನೀವು ಚಾಸಾ.1ರವರಿಗೆ ಅವಾಚ್ಯ ಶಬ್ದಗಳಿಂದ ಬೈದು, ಕೈಗಳಿಂದ ಅವರಿಗೆ ಹೊಡೆದು, ಅವರನ್ನು ಅಡ್ಡಗಟ್ಟಿ ತಡೆದು, ಹೆಚ್ಚು ಕಮ್ಮಿ ಮಾತನಾಡಿದರೆ ನಿನ್ನನ್ನು ಕೊಲೆ ಮಾಡದೇ ಬಿಡುವುದಿಲ್ಲ ಎಂದು ಜೀವ ಬೆದರಿಕೆ ಹಾಕಿರುತ್ತೀರಿ ಎಂದು ತನಿಖೆಯಿಂದ ದೃಢಪಟ್ಟಿದ್ದು, ಆದುದರಿಂದ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.351(2) ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಾಣಿಸಿದ ಆರೋಪಣೆಯ ಬಗ್ಗೆ ನಿಮ್ಮನ್ನು ಈ ನ್ಯಾಯಾಲಯದ ಮುಂದೆ ವಿಚಾರಣೆಗೆ ಗುರಿಪಡಿಸುತ್ತೇನೆ ಎಂದು ಈ ಮೂಲಕ ಆಜ್ಞೆ ಮಾಡುತ್ತಿದ್ದೇನೆ.

Sd/-

(ಅನಿತ)

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂ., ಹುಣಸೂರು.**

ANITHA

Digitally signed by ANITHA
Date: 2026.05.05 17:33:59 +0530

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಹುಣಸೂರು.**

**ಸಿಸಿ ನಂ.1347/2025**

ಆಪಾದಿತನ ಹೆಸರು : ಅಯುಬ್ ಖಾನ್,

ತಂದೆಯ ಹೆಸರು : ಲೇಟ್ ರಫೀಕ್ ಅಹಮ್ಮದ್,

ವಯಸ್ಸು : 45 ವರ್ಷ,

ಉದ್ಯೋಗ : ವೆಲ್ಡರ್,

ವಾಸಸ್ಥಳ : ಶಬ್ಬೀರ್ ನಗರ, ಹುಣಸೂರು ಟೌನ್,
ಮೈಸೂರು ಜಿಲ್ಲೆ.

**ಭಾರತೀಯ ನಾಗರೀಕಾ ಸುರಕ್ಷಾ ಸಂಹಿತೆಯ ಕಲಂ. 263ರ ಅಡಿ ಆರೋಪಿಯ ಹೇಳಿಕೆ**

| | |
|---|---|
| ಪ್ರಶ್ನೆ 1 : | ನಿಮಗೆ ತಿಳಿಯುವಂತಹ ಭಾಷೆಯಲ್ಲಿ ಓದಿ ಹೇಳಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ? |
| ಉತ್ತರಃ | ತಿಳಿಯಿತು |
| ಪ್ರಶ್ನೆ 2 : | ಸದರಿ ಆರೋಪಣೆಗಳನ್ನು ನೀವು ಒಪ್ಪಿಕೊಳ್ಳುತ್ತೀರಾ ಅಥವಾ ನಿರಾಕರಿಸುತ್ತೀರಾ? |
| ಉತ್ತರಃ | ತಪ್ಪು ಮಾಡಿಲ್ಲ, ವಿಚಾರಣೆಯಾಗಬೇಕು. |

ಮೇಲ್ಕಾಣಿಸಿದ ಹೇಳಿಕೆಯನ್ನು ದಿನಾಂಕಃ 05.05.2026 ರಂದು ನನ್ನ ಉಪಸ್ಥಿತಿಯಲ್ಲಿ ಆರೋಪಿಯಿಂದ ಪಡೆಯಲಾಗಿದ್ದು, ಸದರಿ ಹೇಳಿಕೆಯು ಆರೋಪಿಯು ಕೊಟ್ಟ ನಿಜವಾದ ಹೇಳಿಕೆಯಾಗಿದೆ.

ANITHA Digitally signed by ANITHA Date: 2026.05.05 17:34:05 +0530

Sd/-
(ಅನಿತ)
**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂ., ಹುಣಸೂರು.**

ಆರೋಪಿಯ ಸಹಿಃ